## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆರ್.ಐ.ಡಿ.ಎಫ್–24 ರಡಿ ನಬಾರ್ಡ್‌ನಿಂದ ಅನುಮೋದನೆಯಾಗಿರುವ "Drip Irrigation" ಪ್ರಾಯೋಜನೆಗೆ ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: • ಕೃಷಿ ಆಯುಕ್ತರವರ ಪ್ರಸ್ತಾವನೆ ಸಂ. ಉಕೃನಿ/ಕೃಯಾಂ&ಸೂನೀ/ಸೂನೀ/RIDF-24/2018–19 ದಿನಾಂಕ 12.10.2018 ಹಾಗೂ ದಿನಾಂಕ 12.02.2019

**ಪ್ರಸ್ತಾವನೆ:**

ಮೇಲೆ ಓದಲಾದ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, ರಾಜ್ಯದ ಆಯ್ದ 24 ಜಿಲ್ಲೆಗಳಲ್ಲಿ (ಬಾಗಲಕೋಟೆ, ಬೆಂಗಳೂರು (ಗ್ರಾ), ಬೆಳಗಾವಿ, ಬಳ್ಳಾರಿ, ಬೀದರ್, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಕಲ್ಬುರ್ಗಿ, ಹಾಸನ, ಹಾವೇರಿ, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಉತ್ತರ ಕನ್ನಡ, ಯಾದಗಿರಿ) ಎಲ್ಲಾ ವರ್ಗದ ರೈತರಿಗೆ 1818 ಹೆಕ್ಟೇರ್ ಪ್ರದೇಶದಲ್ಲಿ ರೂ.20.00 ಕೋಟಿಗಳ ಅನುದಾನದಲ್ಲಿ ಹನಿ ನೀರಾವರಿ ಘಟಕಗಳ ಅಳವಡಿಕೆಗೆ ಈಗಾಗಲೇ ಅನುಷ್ಠಾನಗೊಳಿಸಲಾಗುತ್ತಿರುವ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಮಾರ್ಗಸೂಚಿಯಂತೆ ಹಾಗೂ ರಾಜ್ಯ ಸರ್ಕಾರವು 2017 ಆಯವ್ಯಯದಲ್ಲಿ ಕಂಡಿಕೆ–23 ರಲ್ಲಿ ಘೋಷಿಸಿರುವಂತೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನವನ್ನು ಹಾಗೂ 2.0 ಕ್ಕಿಂತ ಮೇಲ್ಪಟ್ಟು 5.0 ಹೆಕ್ಟೇರ್ ಪ್ರದೇಶದವರೆಗೆ ಶೇ.50 ರಷ್ಟು ಸಹಾಯಧನವನ್ನು ನೀಡಲು ಉದ್ದೇಶಿಸಿ, ಆರ್.ಐ.ಡಿ.ಎಫ್–24 ರಡಿ ಮಂಜೂರಾತಿ ನೀಡಲು ನಬಾರ್ಡ್ ಸಂಸ್ಥೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ನಬಾರ್ಡ್ ಸಂಸ್ಥೆಯ ವತಿಯಿಂದ ಆರ್.ಐ.ಡಿ.ಎಫ್–24 ರಡಿ ರೂ.20.00 ಕೋಟಿ ಪ್ರಾಯೋಜನೆಯನ್ನು ಮಂಜೂರಾತಿ ಮಾಡಿ ರೂ.19.00 ಕೋಟಿಗಳ ಆರ್.ಐ.ಡಿ.ಎಫ್. ಸಾಲ ನೀಡುವುದಾಗಿ ಹಾಗೂ ರೂ.1.00 ಕೋಟಿ ಮೊತ್ತವನ್ನು ಪ್ರಾಯೋಜನೆಯಡಿ ರಾಜ್ಯದ ಪಾಲಾಗಿ ಭರಿಸಿ ಈ ಬಗ್ಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ಮತ್ತು 2018–19ನೇ ಮತ್ತು 2019–20ನೇ ಸಾಲಿನಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ನಬಾರ್ಡ್ ಸಂಸ್ಥೆಯ ಪತ್ರ ಸಂಖ್ಯೆ: NB.KA.RO/SPD/2489/RIDF-6/2018–19 ದಿನಾಂಕ: 19–09–2018 ರಲ್ಲಿ ತಿಳಿಸಲಾಗಿರುತ್ತದೆ. ಸದರಿ ಪ್ರಾಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡಲು, ರಾಜ್ಯದ ಪಾಲಿನ ರೂ.1.00 ಕೋಟಿ ಅನುದಾನದ ವೆಚ್ಚ ಭರಿಸಲು ಹಾಗೂ ಪ್ರಾಯೋಜನೆಯಡಿ ಕಾರ್ಯಕ್ರಮದ ಅನುಷ್ಠಾನಕ್ಕೆ ಅನುಮೋದನೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಸರ್ಕಾರವು ಪರಿಶೀಲಿಸಿ, ಸರಿಯಾದ ತಾಂತ್ರಿಕ ನಿರ್ಬಂಧಗಳನ್ನು ಪಡೆಯಲಾಗುತ್ತಿದೆಯೇ ಮತ್ತು ಸಂಗ್ರಹಣೆ ನಿಯಮಗಳು ಹಾಗೂ ಮಾರ್ಗಸೂಚಿಗಳನ್ನು ಅನುಸರಿಸಲಾಗುತ್ತಿದೆಯೇ ಎಂಬ ಷರತ್ತಿಗೊಳಪಟ್ಟು, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಕೃಇ 135 ಕೃಯೋಕಾ 2018, ಬೆಂಗಳೂರು, ದಿನಾಂಕ 30.07.2019

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ರಾಜ್ಯದ ಆಯ್ದ 24 ಜಿಲ್ಲೆಗಳಲ್ಲಿ (ಬಾಗಲಕೋಟೆ, ಬೆಂಗಳೂರು (ಗ್ರಾ), ಬೆಳಗಾವಿ, ಬಳ್ಳಾರಿ, ಬೀದರ್, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಕಲ್ಬುರ್ಗಿ, ಹಾಸನ, ಹಾವೇರಿ, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಉತ್ತರ ಕನ್ನಡ, ಯಾದಗಿರಿ) ಹನಿ ನೀರಾವರಿ ಘಟಕಗಳ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ ಸಹಾಯಧನ ನೀಡಲು ನಬಾರ್ಡ್ ಸಂಸ್ಥೆಯಿಂದ RIDF Tranche-24 ರಡಿ ರೂ.20.00 ಕೋಟಿಗಳಿಗೆ (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ) ಮಂಜೂರಾಗಿರುವ ಹನಿ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

..2)

ಈ ಆದೇಶವನ್ನು ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ-366/2019 ದಿನಾಂಕ 11.07.2019 ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 248 ವೆಚ್ಚ-4/2019 ದಿನಾಂಕ 23.03.2019ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
B S Nagarathnam
(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3) ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ.
5) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6) ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
7) ಉಪ ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
8) ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ (ಪ್ರಕರಣ ಸಂಖ್ಯೆ: ಸಿ-366/2019)
9) ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸಾಂಸ್ಥಿಕ ಹಣಕಾಸು), ಬೆಂಗಳೂರು.
10) ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
11) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಇಲಾಖೆ, ಕೃಷಿ ಇಲಾಖೆ.
12) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
14) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4), ಬೆಂಗಳೂರು.
15) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
16) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
17) ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
18) ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.